**<u>ಹೆಚ್ಚುವರಿ ಸಿವಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ ಚಿಂಚೋಳಿ</u>**

**ಸಿಸಿ ನಂ. 85/2020**

| | | | |
|---|---|---|---|
| **ಹೆಸರು** | : | **ರುಕ್ಕುಮಿಣಿ** | ಚಾ.ಸಾ.4 |
| **ಗಂಡನ ಹೆಸರು** | : | **ರೇವಣಸಿದ್ದಪ್ಪ** | ಪ್ರಾ.ಸಾ. 2 |
| **ವಯಸ್ಸು** | : | **55 ವರ್ಷ** | ದಿನಾಂಕಃ 14-05-2025 |
| **ಉದ್ಯೋಗ** | : | **ಕೂಲಿ ಕೆಲಸ** | |
| **ವಾಸಸ್ಥಳ** | : | **ಪಂಗರಗಾ** | |

**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**<u>ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ</u>**

ಚಾಸಾ-1 ನನ್ನ ಗಂಡ. ಚಾಸಾ-5 ನನ್ನ ಪಕ್ಕದ ಮನೆಯವರು. ಆರೋಪಿತರು ನನ್ನ ಸಂಬಂಧಿಕರು.

ಆರೋಪಿತರು ನನಗಾಗಲಿ ಚಾಸಾ-1 ರವರಿಗಾಗಲೀ ತಡಹೀಡಿದಿಲ್ಲ, ಹೊಡೆದಿಲ್ಲ, ಬೈದಿಲ್ಲ, ಜೀವ ಬೆದರಿಕೆ ಹಾಕಿಲ್ಲ. ನಾನು ಪೋಲಿಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಈಗ ನೋಡುತ್ತಿರುವ ಭಾವಚಿತ್ರದಲ್ಲಿ ನಾನು ಇದ್ದೇನೆ. ಸದರಿ ಭಾವಚಿತ್ರವನ್ನು ನಿಪಿ-2 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ತನಿಖಾಧಿಕಾರಿಯವರ ಮುಂದೆ ಸಲ್ಲಿಸಿರುವ ಹೇಳಿಕೆಗೆ ಈ ಸಾಕ್ಷಿ ಸಂಪೂರ್ಣ ಪ್ರತಿಕೂಲ ಸಾಕ್ಷ್ಯ ನುಡಿಯುತ್ತಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೊಡುವಂತೆ ಸ.ಸ.ಅ.ರವರು ಅನುಮತಿ ಕೋರುತ್ತಾರೆ. ಸಾಕ್ಷಿಯ ಹೇಳಿಕೆಯನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು.)

**<u>ಪಾಟೀ ಸವಾಲುಃ ಸಹಾಯಕ ಸರಕಾರಿ ಅಭಿಯೋಜಕರಿಂದ-</u>**

ದಿನಾಂಕಃ 10-06-2019 ರಂದು ಸಾಯಂಕಾಲ 6 ಗಂಟೆ ಸುಮಾರಿಗೆ ನಾಗಪ್ಪರವರು ಮೃತ ಪಟ್ಟಿದ್ದರಿಂದ ನಾನು ಮತ್ತು ನನ್ನ ಗಂಡ ಇಬ್ಬರು ಸೇರಿ ಹೋದಾಗ ಆರೋಪಿತರು ನಮಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ನನ್ನ ಗಂಡನಿಗೆ ತಡೆದು ನಿಲ್ಲಿಸಿ ಕೈಯಿಂದ ಹೊಟ್ಟೆಗೆ ಹೊಡೆದು ಬೆನ್ನಿಗೆ ಹೊಡೆದಿರುತ್ತಾರೆ ಎಂದರೆ ಸರಿಯಲ್ಲ. ನಂತರ ಚಾಸಾ-5ರವರು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಲ್ಲ. ಈ ರೀತಿ ನಾನು ದಿನಾಂಕ 23-06-2019 ರಂದು ಹೇಳಿಕೆಯನ್ನು ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿ ಅಲ್ಲಗಳೆದ ಹೇಳಿಕೆಯನ್ನು ನಿಪಿ-3 ಎಂದು ಗುರುತಿಸಲಾಯಿತು.

ದಿನಾಂಕ 18-06-2019 ರಂದು ಬೆಳಗ್ಗೆ 9.30 ಗಂಟೆಗೆ ಪೋಲಿಸರು ಪಂಚನಾಮೆ ಮಾಡಲು ಬಂದಾಗ ಸ್ಥಳವನ್ನು ತೋರಿಸಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ಗೊತ್ತಿದ್ದರು ಆರೋಪಿತರ ಮಾತು ಕೇಳಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿತರ ಪರವಾಗಿ ಶ್ರೀ RLH ವಕೀಲರಿಂದಃ- ಇಲ್ಲ</u>

(ಮುಕ್ತ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)
ಓ.ಹೇ.ಕೇ. ಸರಿ ಇದೆ.

C/C ಹೆಚ್ಚುವರಿ ಪ್ರ.ದ.ನ್ಯಾ.ದಂ. ಚಿಂಚೋಳಿ